(ಶಿಂಗ್ರೇಗೌಡ )

**ಸಾಕ್ಷಿದಾರರನ್ನು ದಿನಾಂಕಃ 19.06.2024 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ ಪ್ರತಿವಾದಿಯರ ಪರ ವಕೀಲರಾದ ಶ್ರೀ ATK ರವರಿಂದಃ**

ಪ್ರತಿವಾದಿಯರಾದ ರಾಜೇಗೌಡ ಮತ್ತು ಶ್ರೀನಿವಾಸ ನನ್ನ ಸಹೋದರರು ಎಂದರೆ ಸರಿ . ಶ್ರೀನಿವಾಸ ಈಗ ತೀರಿಕೊಂಡಿರುತ್ತಾರೆ ಎಂದರೆ ಸರಿ. ಯಶೋಧಮ್ಮ ಶ್ರೀನಿವಾಸರವರ ಹೆಂಡತಿ ರಂಜಿತ ಮತ್ತು ಗೀತಾ ಶ್ರೀನಿವಾಸ ರವರ ಮಕ್ಕಳು ಎಂದರೆ ಸರಿ. ಸ.ನಂ.56/2 ರಲ್ಲಿ 2 ಎಕರೆ 8 ಗುಂಟೆ ಸಲುವಾಗಿ ದಾವೆಯನ್ನು ಹೂಡಿರುತ್ತೇನೆ. ದಾವಾ ಸ್ವತ್ತು ನನ್ನ ತಂದೆಗೆ ಪಿತ್ರಾರ್ಜಿತ ಆಸ್ತಿಯಾಗಿರುತ್ತದೆ.

2010-11 ನೇ ಸಾಲಿನಲ್ಲಿ ದಾವಾ ಆಸ್ತಿಯು ತಮಗೆ ವಿಭಾಗಪತ್ರದ ಮೂಲಕ ಬಂದಿರುತ್ತದೆ ಎಂದು ತಮ್ಮ ದಾವಾ ಪತ್ರದಲ್ಲಿ ಹೇಳಿದ್ದು, ವಿಭಾಗ ಪತ್ರವನ್ನು ನ್ಯಾಯಾಲಯಕ್ಕೆ ಹಾಜರು ಮಾಡಿರುತ್ತೀರಾ ಎಂದರೆ ಸಾಕ್ಷಿಯು ಹಾಜರು ಮಾಡಿರುತ್ತೇನೆ ಎಂದು ನುಡಿಯುತ್ತಾರೆ. ಯಾವ ಯಾವ ಆಸ್ತಿಗಳನ್ನು ತಮಗೆ ವಿಭಾಗದ ಮೂಲಕ ಕೊಟ್ಟಿರುತ್ತಾರೆ ಎಂದರೆ ಸಾಕ್ಷಿಯು ದಾವಾ ಆಸ್ತಿಯನ್ನು ಮಾತ್ರ ಎಂದು ನುಡಿಯುತ್ತಾರೆ. ಸಾಕ್ಷಿಯು ಮುಂದುವರಿದ ಸ.ನಂ.52/5 ರಲ್ಲಿ 1 ಎಕರೆ 20 ಗುಂಟೆ ಜಮೀನನ್ನು ನಾನು ಕ್ರಯಕ್ಕೆ ಪಡೆದಿರುತ್ತೇನೆ ಎಂದು ನುಡಿಯುತ್ತಾರೆ. ನಾನು ನ್ಯಾಯಾಲಯಕ್ಕೆ ಯಾವುದೇ ವಿಭಾಗ ಪತ್ರವನ್ನು ನ್ಯಾಯಾಲಯಕ್ಕೆ ಹಾಜರು ಮಾಡಿಲ್ಲ, ದಾವಾ ಆಸ್ತಿಯು ನನಗೆ ವಿಭಾಗದ ಮೂಲಕ ಬಂದಿಲ್ಲ ಎಂದರೆ ಸರಿಯಲ್ಲ.

**ಮುಂದುವರಿದ ಪಾಟೀ ಸವಾಲಿಗಾಗಿ ಪ್ರತಿವಾದಿಯರ ಪರ ವಕೀಲರ ಕೋರಿಕೆಯ ಮೇರೆಗೆ ಮುಂದೂಡಲಾಯಿತು.**

**(ಸಾಕ್ಷಿದಾರರ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸಾ ಸ ಇ ಒ.,**

**ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**
**ಹೆಗ್ಗಡದೇವನಕೋಟೆ.**